## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಂಕೀರ್ಣ ಕಟ್ಟಡದ ಆವರಣದಲ್ಲಿ ಹೆಚ್ಚುವರಿ ಕಟ್ಟಡಗಳ ನಿರ್ಮಾಣ ಕಾಮಗಾರಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 104 ಬಿಆರ್‌ಎಸ್ 2019, ದಿನಾಂಕ:18-01-2019.
2. ಸರ್ಕಾರದ ಆದೇಶ ಸಂಖ್ಯೆ: ಆಇ 526 ವೆಚ್ಚ 6/2018, ದಿನಾಂಕ:13-02-2019.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರರವರ ಪತ್ರ ಸಂಖ್ಯೆ:ಬೆಂಗ್ರಾಜಿಪಂ/ಯೋಶಾ/ಸಿಆರ್-50/ 2018-19, ದಿನಾಂಕ:07-01-2020.

**ಪ್ರಸ್ತಾವನೆ:**

ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಂಕೀರ್ಣ ಕಟ್ಟಡದ ಆವರಣದಲ್ಲಿ ಹೆಚ್ಚುವರಿ ಕಟ್ಟಡಗಳ ನಿರ್ಮಾಣ ಮಾಡುವ ಸಲುವಾಗಿ ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಲೆಕ್ಕ ಶೀರ್ಷಿಕೆ: 2515-00-196-1-22-300ರಡಿ ರೂ.850.00ಲಕ್ಷಗಳ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರ ದಿನಾಂಕ:22-11-2019ರ ಪತ್ರದಲ್ಲಿ ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದಲ್ಲಿ ನಿರ್ಮಿಸಿರುವ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಂಕೀರ್ಣ ಕಟ್ಟಡದ ಆವರಣದಲ್ಲಿ ಹೆಚ್ಚುವರಿ ಕಟ್ಟಡಗಳ ನಿರ್ಮಾಣ ಮಾಡುವ ಸಂಬಂಧ ರೂ.800.00ಲಕ್ಷಗಳ ಅನುದಾನಕ್ಕೆ ತಾಂತ್ರಿಕ ಅಂದಾಜು ಪಟ್ಟಿಯನ್ನು ತಯಾರಿಸಿ, ಆಡಳಿತಾತ್ಮಕ ಅನುಮೋದನೆ ನೀಡುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರನ್ನು ಕೋರಿರುತ್ತಾರೆ.

ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದಲ್ಲಿ ನಿರ್ಮಿಸಿರುವ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಂಕೀರ್ಣ ಕಟ್ಟಡದ ಆವರಣದಲ್ಲಿ ಅಗತ್ಯವಿರುವ ಹೆಚ್ಚುವರಿ ಕಟ್ಟಡಗಳ ನಿರ್ಮಾಣ ಮಾಡುವ ಸಲುವಾಗಿ ರೂ.800.00ಲಕ್ಷಗಳ ಅನುದಾನಕ್ಕೆ ತಯಾರಿಸಿರುವ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 104 ಜಿಪಸ 2020, ದಿನಾಂಕ:13-04-2020.

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಂಕೀರ್ಣ ಕಟ್ಟಡದ ಆವರಣದಲ್ಲಿ ಹೆಚ್ಚುವರಿ ಕಟ್ಟಡಗಳನ್ನು ನಿರ್ಮಿಸುವ ಕಾಮಗಾರಿಯ ಅಂದಾಜು ಪಟ್ಟಿಗೆ ರೂ.800.00ಲಕ್ಷಗಳಿಗೆ(ಎಂಟು ನೂರು ಲಕ್ಷ ರೂಪಾಯಿಗಳು ಮಾತ್ರ) ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ಪ್ರತ್ಯೇಕವಾಗಿ ನೀಡಿ ಆದೇಶಿಸಿದೆ.

-

<u>ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಬಳಪಟ್ಟಿರುತ್ತದೆ.</u>

1. ಕಟ್ಟಡದ ನಿರ್ಮಾಣವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ (KTPP), 1999/2000 ಹಾಗೂ ತದನಂತರದಲ್ಲಿ ಬಂದಿರುವ ನಿಯಮಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸುವುದು.
2. ಅನುದಾನವು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಿದೆಯೋ ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು
3. .ಕಾಲಮಿತಿಯೊಳಗೆ ಕಡ್ಡಾಯವಾಗಿ ಕಟ್ಟಡವನ್ನು ನಿರ್ಮಿಸುವುದು.
4. ಕಟ್ಟಡದ ನಿರ್ಮಾಣಕ್ಕೆ ಕಟ್ಟಡ ನಕ್ಷೆ ತಯಾರಿಸುವಾಗ ನೈಸರ್ಗಿಕ ಬೆಳಕು ಮತ್ತು ಗಾಳಿಯು ಯಥೇಚ್ಛವಾಗುವ ಲಭ್ಯವಾಗುವ ರೀತಿಯಲ್ಲಿ ಕಟ್ಟಡದ ವಿನ್ಯಾಸವನ್ನು ಸಿದ್ಧಪಡಿಸುವುದು. ಇದರಿಂದಾಗಿ ಅನಾವಶ್ಯಕ ವಿದ್ಯುತ್ ಬಳಕೆಯ ವೆಚ್ಚವನ್ನು ಕಡಿತಗೊಳಿಸಬಹುದಾಗಿದೆ.
5. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸುವುದು.
6. ಅನುದಾನದ ಬಳಕೆ ಪ್ರಮಾಣ ಪತ್ರವನ್ನು GFR 12C ನಮೂನೆಯಲ್ಲಿ ಕಡ್ಡಾಯವಾಗಿ ಸಲ್ಲಿಸುವುದು. ಈ ಕಾಮಗಾರಿಗಳ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ(ವರ್ಕ್‌ಸಾಫ್ಟ್) ತಂತ್ರಾಂಶದಲ್ಲಿ ಅಳವಡಿಸುವುದು ಹಾಗೂ ಹಣ ಪಾವತಿಸುವಾಗ ವರ್ಕ್‌ಸಾಫ್ಟ್ ಮೂಲಕವೇ ಪಾವತಿಸುವುದು.
7. ಕಟ್ಟಡದ ಕಾಮಗಾರಿಯನ್ನು ಎಮ್.ಜಿ.ಎನ್.ಆರ್.ಇ.ಜಿ.ಎಸ್ ಯೋಜನೆಯಡಿಯ ಗುಣಮಟ್ಟ ನಿಯಂತ್ರಣ ವಿಭಾಗದಿಂದ ಗುಣಮಟ್ಟ ಪರಿಶೀಲನೆ ಮಾಡಿಸುವುದು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ:03-04-2019ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/04/2020
(ಸಿ.ಮಂಜುಳಾ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

13.04.2020

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.

4. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ
5. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ.
6. ಇಲಾಖಾ ವೆಬ್‌ಸೈಟ್/ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂ.329, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-2)ರವರ ಆಪ್ತ ಸಹಾಯಕ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.